**ಕರ್ನಾಟಕ ಸರ್ಕಾರ**

**ಉಪ ನಿರ್ದೇಶಕರ ಕಾರ್ಯಾಲಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಗದಗ**

**ಜಿಲ್ಲಾ ಆಡಳಿತ ಭವನ, ಕೊಠಡಿ ಸಂ.006 ದೂ.ಸಂ.08372–220711 ಈ ಮೇಲ್ ವಿಳಾಸ:deputydirwcdgadag@gmail.com**

ಸಂ.ಉನಿಗ/ಮಮಅಇ/ಅಂಕಾಕ/ಸಹಾಯಕಿ/2024-25 ದಿನಾಂಕ:20.08.2024

**<u>-: ಅಧಿಸೂಚನೆ :-</u>**

ಸರ್ಕಾರದ ಆದೇಶ ಸಂಖ್ಯೆ : ಮಮಇ 154 ಐಸಿಡಿ 2020, ಬೆಂಗಳೂರು, ದಿನಾಂಕ:03/12/2022, ರ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿ ನೇಮಕಾತಿಯ ಮಾರ್ಗಸೂಚಿಯಂತೆ ಮತ್ತು ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಆಯ್ಕೆ ಪ್ರಕ್ರಿಯೆಯನ್ನು ಆನ್-ಲೈನ್ ಮೂಲಕ ಕೈಗೊಳ್ಳಲು ಪತ್ರ ಸಂಖ್ಯೆ ಮಮಇ/ ಐಸಿಡಿ/ ಅಂ.ಕಾ/ ಅಂ.ಸನೇ: 2024-25, ದಿನಾಂಕ:04/12/2023, ಹಾಗೂ ಮಾನ್ಯ ಜಿಲ್ಲಾಧಿಕಾರಿಗಳು, ಗದಗ ರವರ ದಿನಾಂಕ:28.06.2024ರ ಕಡತ ಕಂಡಿಕೆ-04 ರ ಅನುಮೋದನೆಯಂತೆ, ಅನುಬಂಧ (1)ರಲ್ಲಿ ಅಂಗನವಾಡಿ ಕಾರ್ಯಕರ್ತೆ ಹಾಗೂ ಅನುಬಂಧ (2)ರಲ್ಲಿ ಸಹಾಯಕಿಯರ ನಿಬಂಧನೆಗಳೊಪಟ್ಟು, ಗದಗ ಜಿಲ್ಲೆಯ ಮುಂಡರಗಿ <u>ಶಿಶು ಅಭಿವೃದ್ಧಿ ಯೋಜನೆಯ ವ್ಯಾಪ್ತಿಯಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆ ಒಟ್ಟು.05 ಹಾಗೂ ಅಂಗನವಾಡಿ ಸಹಾಯಕಿಯರ ಒಟ್ಟು.24</u> ಗೌರವ ಸೇವೆಯ ಹುದ್ದೆಗಳನ್ನು ಭರ್ತಿ ಮಾಡಲು, ಆನ್ ಲೈನ್ **(ವೆಬ್:https://karnemakaone.kar.nic.in/abcd/)** ನಿಬಂಧನೆಗಳು ತಿಳಿಸಿರುವಂತೆ, ಅರ್ಹ ಮಹಿಳಾ ಹಾಗೂ ಲಿಂಗತ್ವ ಅಲ್ಪಸಂಖ್ಯಾತ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸುವ ಪ್ರಾರಂಭದ ದಿನಾಂಕ:20.08.2024 ರಿಂದ ದಿನಾಂಕ:19.09.2024ರ ವರೆಗೆ ನಿಗದಿಪಡಿಸಲಾಗಿರುತ್ತದೆ.

**1. <u>ಸೂಚನೆಗಳು :</u>**

1. ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿ ಹುದ್ದೆಗಳಿಗೆ ಅರ್ಜಿಗಳನ್ನು ಆನ್‌ಲೈನ್ ಮೂಲಕವೇ ಮಾತ್ರ. ಸಲ್ಲಿಸತಕ್ಕದ್ದು, ಇತರೇ ಯಾವುದೇ ಮೂಲದಿಂದ ಸಲ್ಲಿಸಲು ಅವಕಾಶವಿರುವುದಿಲ್ಲ. ಅವುಗಳನ್ನು ಪರಿಗಣಿಸಲಾಗುವುದಿಲ್ಲ.
2. ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಮೊದಲು ಈ ಕೆಳಗಿನ ನೇಮಕಾತಿಯ ಮಾರ್ಗಸೂಚಿ/ ನಿಬಂಧನೆಗಳನ್ನು ಸ್ಪಷ್ಟವಾಗಿ ಓದಿಕೊಂಡು, ನೀಡಲಾಗಿರುವ ಸೂಚನೆಯಂತೆ ಅರ್ಜಿಗಳನ್ನು ಭರ್ತಿ ಮಾಡಿ, ಕಡ್ಡಾಯವಾಗಿ ಅವಶ್ಯ ಇರುವ ಮೂಲ ದಾಖಲೆಗಳನ್ನು ಸ್ಪಷ್ಟವಾಗಿ ಸ್ಕ್ಯಾನ್ ಮಾಡಿ. ಅಪ್ ಲೋಡ್ ಮಾಡಿ ಅರ್ಜಿ ಸಲ್ಲಿಸುವುದು.
3. ಆನ್‌ಲೈನ್ ಮೂಲಕವೇ ಎಲ್ಲಾ ಅಗತ್ಯ ದಾಖಲಾತಿಗಳನ್ನು ಸಲ್ಲಿಸುವುದು, ತದನಂತರ ಸಲ್ಲಿಸುವ ದಾಖಲಾತಿಗಳನ್ನು ಪರಿಗಣಿಸುವುದಿಲ್ಲ.
4. ಆನ್‌ಲೈನ್ ಅರ್ಜಿಯೊಂದಿಗೆ ಯಾವುದೇ ಅಗತ್ಯ ದಾಖಲೆಯನ್ನು ಸಲ್ಲಿಸದೇ ಇದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸುವುದು ಮತ್ತು ಅಸ್ಪಷ್ಟ / ಅಪೂರ್ಣ ದಾಖಲೆಗಳನ್ನು ಪರಿಗಣಿಸುವುದಿಲ್ಲ.

**<u>2. ಮಾರ್ಗಸೂಚಿ/ಮಾನದಂಡಗಳು:</u>**

1. ಅರ್ಹತೆ: ಮಹಿಳೆಯರು ಹಾಗೂ ಲಿಂಗತ್ವ ಅಲ್ಪಸಂಖ್ಯಾತ ಮಹಿಳೆಯರು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.
2. ವಯೋಮಿತಿ: ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಹುದ್ದೆಗೆ ಅರ್ಜಿ ಸಲ್ಲಿಸಲು 19-35 ವರ್ಷ ವಯೋಮಿತಿಯೊಳಗಿನ ಹೆಣ್ಣು ಮಕ್ಕಳು ಹಾಗೂ ಮಹಿಳಾ ಲಿಂಗತ್ವ ಅಲ್ಪಸಂಖ್ಯಾತರು ಅರ್ಜಿ ಸಲ್ಲಿಸಬಹುದು ಹಾಗೂ ವಿಕಲಚೇತನರಿಗೆ 10 ವರ್ಷಗಳ ವಯೋಮಿತಿ ಸಡಿಲಿಕೆ ಇರುತ್ತದೆ.

**<u>3. ಸ್ಥಳೀಯತೆ:</u>**

1. ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿ ಹುದ್ದೆಗಳಿಗೆ ಸಂಬಂಧಿಸಿದಂತೆ ಗ್ರಾಮಾಂತರ ಪ್ರದೇಶದ ಕೇಂದ್ರವಾದಲ್ಲಿ ಆಯಾ ಕಂದಾಯ ಗ್ರಾಮದಲ್ಲಿ ವಾಸ್ತವ್ಯ ಹೊಂದಿರಬೇಕು. ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಆಯ್ಕೆಗೆ ಸ್ಥಳೀಯ ಮಜಿರೆ, ತಾಂಡಾ ಹಾಗೂ ಹಾಡಿಗೆ ಸೇರಿದವರಾಗಿದ್ದರೆ ಸಂಬಂಧಿಸಿದ ವಾಸ್ತವ್ಯ ಪ್ರಮಾಣ ಪತ್ರವನ್ನು ಸಕ್ಷಮ ಪ್ರಾಧಿಕಾರದಿಂದ ಪಡೆದು ಅರ್ಜಿಯೊಂದಿಗೆ ಸಲ್ಲಿಸುವುದು.
2. ನಗರ ಪ್ರದೇಶದ ಅಂಗನವಾಡಿ ಕೇಂದ್ರವಾದಲ್ಲಿ ಅಯಾ ಕಂದಾಯ ವಾರ್ಡ್ ನಲ್ಲಿ ವಾಸ್ತವ್ಯ ಹೊಂದಿರಬೇಕು ಹಾಗೂ ವಾಸಸ್ಥಳ ಪ್ರಮಾಣ ಪತ್ರವನ್ನು ಸಕ್ಷಮ ಪ್ರಾಧಿಕಾರದಿಂದ ಪಡೆದು ಅರ್ಜಿಯೊಂದಿಗೆ ಸಲ್ಲಿಸುವುದು. (ಚುನಾವಣಾ ವಾರ್ಡ್‌ಗಳನ್ನು ಪರಿಗಣಿಸುವುದಿಲ್ಲ)
3. ತಹಶೀಲ್ದಾರರು/ಉಪ-ತಹಶೀಲ್ದಾರರಿಂದ ಮೂರು ವರ್ಷದ ವಾಸ್ತವ್ಯ ದೃಢೀಕರಣದೊಂದಿಗೆ ಸ್ಥಳೀಯರು ಎಂಬುದನ್ನು ದೃಢೀಕರಿಸಲು ಪೂರಕ ದಾಖಲೆಗಳಾದ ಆಧಾರ ಕಾರ್ಡ್, ರೇಷನ್ ಕಾರ್ಡ ಮತದಾರರ ಗುರುತಿನ ಚೀಟಿಗಳನ್ನು ಅರ್ಜಿಯೊಂದಿಗೆ ಸಲ್ಲಿಸುವುದು. ಮಜಿರೆ, ತಾಂಡಾ ಹಾಗೂ ಹಾಡಿಗೆ ಸಂಬಂಧಿಸಿದ ವಾಸ್ತವ್ಯ ಪ್ರಮಾಣ ಪತ್ರ ಪಡೆಯುವುದು.

**<u>4. ಅಂಗನವಾಡಿ ಕಾರ್ಯಕರ್ತೆ / ಸಹಾಯಕಿ ಹುದ್ದೆಗೆ ವಿದ್ಯಾರ್ಹತೆ:</u>**

1. ಕನಿಷ್ಠ ಪಿ.ಯು.ಸಿ. ತೇರ್ಗಡೆ ಹೊಂದಿರಬೇಕು. ಎಸ್.ಎಸ್.ಎಲ್.ಸಿ. ಯಲ್ಲಿ ಕನ್ನಡ ಭಾಷೆಯನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯನ್ನಾಗಿ ಓದಿರಬೇಕು.
2. ಅಂಗನವಾಡಿ ಕಾರ್ಯಕರ್ತೆಯರ ನೇಮಕಾತಿ ಸಂದರ್ಭದಲ್ಲಿ "ಸರ್ಕಾರದ ಅಂಗಿಕೃತ ಸಂಸ್ಥೆಗಳಿಂದ D.S.E.R.T ಯಿಂದ ECCE ಡಿಪ್ಲೋಮಾ ಕೋರ್ಸ್. JOC ಕೋರ್ಸ್. NTT ಕೋರ್ಸ್‌ಗಳನ್ನು ಹಾಗೂ ಅಂಗನವಾಡಿ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ಡಿಪ್ಲೋಮಾ ನ್ಯೂಟ್ರಿಷಿಯನ್, ಹೋಂ ಸೈನ್ಸ್ ಸರ್ಟಿಫಿಕೇಟ್ ಕೋರ್ಸ, ಒಂದು ವರ್ಷದ ನರ್ಸರಿ ಅಥವಾ ಪೂರ್ವ ಪ್ರಾಥಮಿಕ ತರಬೇತಿ ಪಡೆದು ಪ್ರಮಾಣ ಪತ್ರ ಹೊಂದಿದವರಿಗೆ ಮೊದಲ ಆದ್ಯತೆ ನೀಡಲಾಗುವುದು ಹಾಗೂ ಸದರಿಯವರಿಗೆ ಬೋನಸ್ +5 ಅಂಕಗಳನ್ನು ನೀಡಲಾಗುವುದು.
3. ಅಂಗನವಾಡಿ ಸಹಾಯಕಿ ವಿದ್ಯಾರ್ಹತೆ: ಹುದ್ದೆಗೆ ಕನಿಷ್ಠ ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ತರಗತಿಯಲ್ಲಿ ಉತ್ತೀರ್ಣವಾಗಿರಬೇಕು.
4. ಕರ್ನಾಟಕ ರಾಜ್ಯ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಮುಕ್ತ ಶಾಲೆ/ಮುಕ್ತ ವಿದ್ಯಾಲಯಗಳಲ್ಲಿ ಎಸ್.ಎಸ್.ಎಲ್.ಸಿ. ತೇರ್ಗಡೆ ಹೊಂದಿದ ಅಭ್ಯರ್ಥಿಗಳು ಪ್ರಥಮ/ದ್ವಿತೀಯ ಭಾಷೆಯಾಗಿ ಕನ್ನಡ ಹಾಗೂ ಸಾಮಾನ್ಯ ಗಣಿತ ಮತ್ತು ಸಮಾಜ ಶಾಸ್ತ್ರ,ಸಮಾಜ ವಿಜ್ಞಾನ ವಿಷಯಗಳನ್ನು ಕಡ್ಡಾಯವಾಗಿ ವ್ಯಾಸಂಗ ಮಾಡಿದ್ದು ಪ್ರಮಾಣ ಪತ್ರ/ಅಂಕಪಟ್ಟಿಯು ಗರಿಷ್ಠ 625 ಕನಿಷ್ಠ 219 ಅಂಕಗಳನ್ನು ಹೊಂದಿರುವ ಅಭ್ಯರ್ಥಿಗಳನ್ನು ಮಾತ್ರ ಪರಿಗಣಿಸಲಾಗುವುದು.
5. ಬೇರೆ ರಾಜ್ಯಗಳಲ್ಲಿ ವ್ಯಾಸಂಗ ಮಾಡಿದ್ದು, ಕನ್ನಡವನ್ನು ಪ್ರಥಮ/ದ್ವಿತೀಯ ಭಾಷೆಯಾಗಿ ಅಭ್ಯಾಸ ಮಾಡಿದ್ದರೂ SSLC ಪರೀಕ್ಷೆಗೆ ಆ ರಾಜ್ಯದಲ್ಲಿ ನಿಗದಿಪಡಿಸಲಾದ ಗರಿಷ್ಠ ಹಾಗೂ ಕನಿಷ್ಠ ಅಂಕಗಳು ಹಾಗೂ ಕರ್ನಾಟಕ ರಾಜ್ಯದಲ್ಲಿ ನಿಗದಿಪಡಿಸಿದ ಗರಿಷ್ಠ ಹಾಗೂ ಕನಿಷ್ಠ ಅಂಕದಲ್ಲಿ ವ್ಯತ್ಯಾಸವಿದ್ದಲ್ಲಿ ಕರ್ನಾಟಕದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳನ್ನು ಮಾತ್ರ ಪರಿಗಣಿಸಲಾಗುವುದು.

**Visit to "KarnatakaHelp.in"**

6. ಅಂಗನವಾಡಿ ಸಹಾಯಕಿಯರು ಯಾವುದೇ ಭಾಷಾ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ್ದರೂ ಹಾಗೂ ಯಾವುದೇ ರಾಜ್ಯದಲ್ಲಿ ವ್ಯಾಸಂಗ ಮಾಡಿದ್ದರೂ ಸಹ ಅವರು ಕನ್ನಡ ಭಾಷೆಯನ್ನು ಪ್ರಥಮ/ದ್ವಿತೀಯ ಭಾಷೆಯಾಗಿ ವ್ಯಾಸಂಗ ಮಾಡಿರಬೇಕು. ಹಾಗೂ ಮಾತೃಭಾಷೆ ಕನ್ನಡವಲ್ಲದೇ ಇರುವ ಅಭ್ಯರ್ಥಿಗಳಿಗೆ ಆಯ್ಕೆ ಸಮಿತಿಯು ಆಯ್ಕೆ ಸಮಯದಲ್ಲಿ ಸಂದರ್ಶನ ಏರ್ಪಡಿಸಿ ಹಾಗೂ ಅವಶ್ಯವಿದ್ದಲ್ಲಿ ಕನ್ನಡ ಭಾಷೆಯ ಜ್ಞಾನದ ಕುರಿತಂತೆ ಓದಿಸಿ, ಬರೆಸಿ ಅವರ ಕನ್ನಡ ಭಾಷಾ ಜ್ಞಾನವನ್ನು ಪರೀಕ್ಷಿಸಿ ಅವರನ್ನು ಆಯ್ಕೆ ಮಾಡುವ ಬಗ್ಗೆ ಜಿಲ್ಲಾ ಮಟ್ಟದ ಆಯ್ಕೆ ಸಮಿತಿಯಿಂದ ನಿರ್ಧರಿಸಲಾಗುವುದು.

**5. ಹುದ್ದೆಯ ಮೀಸಲಾತಿ :**

1. ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿ ಹುದ್ದೆಗೆ ಶೇ. 25 ರಷ್ಟು ಅಲ್ಪಸಂಖ್ಯಾತ ಸಮುದಾಯದ ಜನಸಂಖ್ಯೆ ಇರುವ ಪ್ರದೇಶದ ಅಂಗನವಾಡಿ ಕೇಂದ್ರಗಳಲ್ಲಿ ಕನ್ನಡ ಭಾಷೆಯೊಂದಿಗೆ ಆಯಾ ಅಲ್ಪಸಂಖ್ಯಾತ ಸಮುದಾಯದ ಭಾಷೆ ಬಲ್ಲವರನ್ನು ಕಾರ್ಯಕರ್ತೆ/ಸಹಾಯಕಿಯ ಹುದ್ದೆಗೆ ಆಯ್ಕೆ ಮಾಡಲಾಗುವುದು. ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯ ಹುದ್ದೆಗೆ ಅರ್ಜಿ ಸಲ್ಲಿಸಿದವರಲ್ಲಿ ಒಂದಕ್ಕಿಂತ ಹೆಚ್ಚು ಅಭ್ಯರ್ಥಿಗಳು ಸಮಾನ ಅಂಕಗಳಿಸಿದ್ದಲ್ಲಿ, ವಯೋಹಿದಿತನ ಹೊಂದಿರುವವರನ್ನು ಪರಿಗಣಿಸಲಾಗುವುದು. ಒಂದು ವೇಳೆ ವಯಸ್ಸು ಸಮಾನವಾಗಿದ್ದಲ್ಲಿ, ಇವರಲ್ಲಿ ವಿಧವೆಯವರನ್ನು ಪರಿಗಣಿಸಲಾಗುತ್ತದೆ.

**6. ಅಂಗನವಾಡಿ ಕೇಂದ್ರಗಳ ವ್ಯಾಪ್ತಿ ಗುರುತಿಸುವಿಕೆ :**

1. ಒಂದು ಗ್ರಾಮದಲ್ಲಿ ಈಗಾಗಲೇ ಅಂಗನವಾಡಿ ಕೇಂದ್ರವಿದ್ದು ಪುನಃ ಬೇಡಿಕೆಗೆ ಅನುಸಾರವಾಗಿ ಹೊಸ ಕೇಂದ್ರವನ್ನು ಪ್ರಾರಂಭಿಸುತ್ತಿದ್ದಲ್ಲಿ ಹೊಸ ಕೇಂದ್ರ ಪ್ರಾರಂಭಿಸುವ ಪ್ರದೇಶದ (ವ್ಯಾಪ್ತಿಯ) ಜನಸಂಖ್ಯೆಯಲ್ಲಿ ಶೇ 40 ಕ್ಕಿಂತ ಹೆಚ್ಚು ಜನಸಂಖ್ಯೆ ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡದವರಿದ್ದಲ್ಲಿ ಆ ಅಂಗನವಾಡಿ ಕೇಂದ್ರಕ್ಕೆ ಸದರಿ ವರ್ಗದವರಿಗೆ ಕಾರ್ಯಕರ್ತೆ/ಸಹಾಯಕಿ ಹುದ್ದೆಯನ್ನು ನಿಗದಿಪಡಿಸಿ ಪ್ರಕಟಣೆ ಹೊರಡಿಸಿ ಸದರಿ ಗ್ರಾಮ/ನಗರ ಪ್ರದೇಶದಲ್ಲಿ ಕಂದಾಯ ವಾರ್ಡ್ ನಿಂದ ಅರ್ಜಿಗಳನ್ನು ಆಹ್ವಾನಿಸಿ ಆ ವರ್ಗದವರನ್ನೇ ಆಯ್ಕೆ ಮಾಡುವುದು.

**7. ಆಯ್ಕೆ ಆದ್ಯತೆ :-**

1. ಆ್ಯಸಿಡ್ ದಾಳಿಗೆ ತುತ್ತಾದ ಮಹಿಳೆಯರ ಆಯ್ಕೆ: ಆಸಿಡ್ ದಾಳಿಗೆ ತುತ್ತಾದ ಮಹಿಳೆಯರು ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಹುದ್ದೆಗೆ ಅರ್ಜಿ ಸಲ್ಲಿಸಿದ್ದಲ್ಲಿ ಅರ್ಹ ಅಭ್ಯರ್ಥಿಗೆ +05 ಬೋನಸ್ ಅಂಕಗಳನ್ನು ನೀಡಲಾಗುವುದು.
2. ಇಲಾಖೆಯ ಸಂಸ್ಥೆಗಳ ನಿವಾಸಿಗಳ ಆಯ್ಕೆ: ಇಲಾಖೆಯ ಸುಧಾರಣಾ ಸಂಸ್ಥೆ/ರಾಜ್ಯ ಮಹಿಳಾ ನಿಲಯಗಳ ನಿವಾಸಿಗಳು ಕನಿಷ್ಟ 03 ವರ್ಷ ಸಂಸ್ಥೆಯಲ್ಲಿರಬೇಕು ಹಾಗೂ ಈ ಬಗ್ಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳಿಂದ ಪಡೆದ ನಿವಾಸಿ ಪ್ರಮಾಣ ಪತ್ರ ನೇಮಕಾತಿ ಪ್ರಕ್ರಿಯೆಯಲ್ಲಿ ನಿಗದಿಪಡಿಸಿದ ವಿದ್ಯಾರ್ಹತೆಯಲ್ಲಿ ಗಳಿಸಿದ ಅಂಕಗಳಿಗೆ +10 ಬೋನಸ್ ಅಂಕಗಳನ್ನು ನೀಡಲಾಗುವುದು. ವಾಸಸ್ಥಳ ದೃಢೀಕರಣವನ್ನು ಸಲ್ಲಿಸಿರುವ ನಿವಾಸಿಗಳು ಜಿಲ್ಲೆಯಲ್ಲಿ ಎಲ್ಲಿಯಾದರೂ ಅರ್ಜಿ ಸಲ್ಲಿಸಬಹುದಾಗಿರುತ್ತದೆ.

**8. ವಿಧವೆಯರ ಆಯ್ಕೆ:**

- ನೇಮಕಾತಿ ಪ್ರಕ್ರಿಯೆಯಲ್ಲಿ ನಿಗದಿಪಡಿಸಿದ ವಿದ್ಯಾರ್ಹತೆಯಲ್ಲಿ ಗಳಿಸಿದ ಅಂಕಗಳಿಗೆ +5 ಬೋನಸ್ ಅಂಕಗಳನ್ನು ನೀಡುವುದು. ಮರಣ ಪ್ರಮಾಣ ಪತ್ರ, ವಿಧವಾ ಪ್ರಮಾಣ ಪತ್ರಗಳನ್ನು ಕಡ್ಡಾಯವಾಗಿ ಲಗತ್ತಿಸುವುದು.

**9. ಅಂಗವಿಕಲರ ಆಯ್ಕೆ:**

- ದೈಹಿಕ ಅಂಗವಿಕಲತೆ ಪ್ರಮಾಣವನ್ನು ಶೇ40% ಕ್ಕಿಂತ ಹೆಚ್ಚಿರದ ಹಾಗೆ ನಿಗಧಿಪಡಿಸುವುದು. ವಿದ್ಯಾರ್ಹತೆಯಲ್ಲಿ ಗಳಿಸಿದ ಅಂಕಗಳಿಗೆ +5 ಬೋನಸ್ ಅಂಶಗಳನ್ನು ನೀಡುವುದು. ಅಂಗವಿಕಲರು ಪ್ರಸ್ತುತ ತಾವು ಎಲ್ಲಿ ವಾಸವಿರುವುದಾಗಿ ವಾಸ ಸ್ಥಳ ಪ್ರಮಾಣಪತ್ರವನ್ನು ಸಲ್ಲಿಸಿರುತ್ತಾರೋ ಆ ಸ್ಥಳವನ್ನೇ ಅವರ ವಾಸಸ್ಥಳ ಎಂದು ಪರಿಗಣಿಸಲಾಗುವುದು.
- ಅಂಗವಿಕಲ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಸಂದರ್ಭದಲ್ಲಿ ಅಂಗವಿಕಲತೆಯ ಪ್ರಮಾಣದ ಬಗ್ಗೆ ಸಂಶಯ ಉಂಟಾದಲ್ಲಿ, ಆ ಅಭ್ಯರ್ಥಿಯನ್ನು ಆಯ್ಕೆ ಸಮಿತಿಯ ಮುಂದೆ ಖುದ್ದು ಹಾಜರಾಗಲು ಸೂಚಿಸಿ ಸದರಿ ಹುದ್ದೆ ನಿರ್ವಹಿಸಲು ಸಮರ್ಥರಿರುವ ಬಗ್ಗೆ ಸಮಿತಿಯಲ್ಲಿಯೇ ಪರಿಶೀಲಿಸಿ ನಿರ್ಧರಿಸಲಾಗುವುದು.

**10. ಬೋನಸ್ ಅಂಕಗಳು: (ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರಿಗೆ)**

- ಅಂಗನವಾಡಿ ಕಾರ್ಯಕರ್ತೆ/ಸಹಾಯಕಿ ಹುದ್ದೆಗೆ ಅರ್ಜಿ ಸಲ್ಲಿಸಿದವರಲ್ಲಿ ಒಂದಕ್ಕಿಂತ ಹೆಚ್ಚು ಅಭ್ಯರ್ಥಿಗಳು ಸಮಾನ ಅಂಕಗಳಿಸಿದ್ದಲ್ಲಿ ವಯೋಹಿರಿತನವನ್ನು ಪರಿಗಣಿಸಬೇಕು. ವಯಸ್ಸು ಸಮಾನವಾಗಿದ್ದಲ್ಲಿ ವಿಧವೆ/ವಿಚ್ಛೇಧಿತೆಯರನ್ನು ಪರಿಗಣಿಸಬೇಕು. ಮಾಜಿ ದೇವದಾಸಿಯ ಮಗಳು, ಯೋಜನಾ ನಿರಾಶ್ರಿತರು. ವಿಚ್ಛೇದಿತ ಮಹಿಳೆಯರು ಇವರುಗಳಿಗೆ +5 ಬೋನಸ್ ಅಂಕಗಳನ್ನು ನಿಗದಿಪಡಿಸುವುದು. (ಅಧಿಕೃತ ಪ್ರಮಾಣಪತ್ರ ನೀಡುವ ಷರತ್ತಿಗೊಳಪಟ್ಟು)

**11. ಆನ್‌ಲೈನ್ ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲೆಗಳು:-**

1. ಅರ್ಜಿ ನಿಗದಿತ ನಮೂನೆಯಲ್ಲಿ (ಆನ್‌ಲೈನ್)
2. ಜನನ ಪ್ರಮಾಣ ಪತ್ರ/ಜನ್ಮ ದಿನಾಂಕ ಇರುವ ಎಸ್.ಎಸ್.ಎಲ್.ಸಿ ಅಂಕಪಟ್ಟಿ,
3. ನಿಗದಿತ ವಿದ್ಯಾರ್ಹತೆಯ ಅಂಕಪಟ್ಟಿ,
4. ತಹಶೀಲ್ದಾರರು/ಉಪ ತಹಶೀಲ್ದಾರರಿಂದ ಪಡೆದ ಮೂರು (3) ವರ್ಷದೊಳಗಿನ ವಾಸಸ್ಥಳ ದೃಢೀಕರಣ ಪತ್ರ
5. ಅಭ್ಯರ್ಥಿಗಳ ಜಾತಿ ಪ್ರಮಾಣ ಪತ್ರ
6. ಪತಿಯ ಮರಣ ಪ್ರಮಾಣ ಪತ್ರ ಹಾಗೂ ವಿಧವಾ ಪ್ರಮಾಣ ಪತ್ರ (ವಿಧವಾ ವೇತನದ ದೃಢೀಕರಣವನ್ನು ಪರಿಗಣಿಸಲಾಗುವುದಿಲ್ಲ.)
7. ಅಂಗವಿಕಲತೆ ಪ್ರಮಾಣಪತ್ರ (ಅಂಗವಿಕಲ ವೇತನದ ದೃಢೀಕರಣವನ್ನು ಪರಿಗಣಿಸಲಾಗುವುದಿಲ್ಲ.)
8. ವಿಚ್ಛೇದನ ಪ್ರಮಾಣ ಪತ್ರ (ನ್ಯಾಯಾಲಯದಿಂದ ಪಡೆದಿರಬೇಕು)
9. ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ ನಡೆಸಲ್ಪಟ್ಟ ಮಾಜಿ ದೇವದಾಸಿಯರ ಸಮೀಕ್ಷೆಯ ಪಟ್ಟಿಯಲ್ಲಿರುವ ಮಾಜಿ ದೇವದಾಸಿಯರ ಮಕ್ಕಳು ಎಂಬುದರ ಬಗ್ಗೆ ಮಹಿಳಾ ಅಭಿವೃದ್ಧಿ ನಿಗಮದ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ.
10. ಇಲಾಖೆಯ ಸುಧಾರಣಾ ಸಂಸ್ಥೆ/ರಾಜ್ಯ ಮಹಿಳಾ ನಿಲಯಗಳ ನಿವಾಸಿಗಳು ಕನಿಷ್ಟ 03 ವರ್ಷ ಸಂಸ್ಥೆಯಲ್ಲಿರಬೇಕು. ಹಾಗೂ ಈ ಬಗ್ಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳಿಂದ ಪಡೆದ ನಿವಾಸಿ ಪ್ರಮಾಣ ಪತ್ರ,
11. ಯೋಜನಾ ನಿರಾಶ್ರಿತರ ಬಗ್ಗೆ ತಹಶೀಲ್ದಾರರಿಂದ ಪಡೆದ ಪ್ರಮಾಣ ಪತ್ರ,
12. ಆಧಾರ ಕಾರ್ಡ/ಮತದಾರರ ಗುರುತಿನ ಚೀಟಿ/ರೇಷನ್ ಕಾರ್ಡ / ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಂದ ಪಡೆದ ದೃಢೀಕರಣ ಪತ್ರ
13. ಎಲ್ಲಾ ದಾಖಲಾತಿಗಳನ್ನು ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಣ ಮಾಡಿಸಿ ಸಲ್ಲಿಸುವುದು.

ಉಪ ನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಗದಗ

Visit to "KarnatakaHelp.in"

| ಶಿಶು ಅಭಿವೃದ್ಧಿ ಯೋಜನೆ, ಮುಂಡರಗಿ | | | | | | |
|---|---|---|---|---|---|---|
| ಮುಂಡರಗಿ ತಾಲ್ಲೂಕಿನ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಖಾಲಿ ಇರುವ ಹುದ್ದೆಗಳ ಮಾಹಿತಿ. | | | | | | |
| **ಅಂಗನವಾಡಿ ಕಾರ್ಯಕರ್ತೆ** | | | | | | |
| ಕ್ರ ಸಂ. | ತಾಲ್ಲೂಕು | ಗ್ರಾಮ ಪಂಚಾಯತಿ ಹೆಸರು | ಗ್ರಾಮದ ಹೆಸರು | ವಾರ್ಡ ಸಂಖ್ಯೆ | ಅಂಗನವಾಡಿ ಕೇಂದ್ರದ ಹೆಸರು, ಸಂಖ್ಯೆ | ನಿಗದಿಪಡಿಸಲಾದ ಮೀಸಲಾತಿ. |
| 1 | ಮುಂಡರಗಿ | ಶಿಂಗಟಾಲೂರು | ಶಿಂಗಟಾಲೂರು | - | 161 | ಎಸ್.ಸಿ. |
| 2 | ಮುಂಡರಗಿ | ಬೀಡನಾಳ | ಬೀಡನಾಳ ತಾಂಡಾ | - | 121 | ಎಸ್.ಸಿ. |
| 3 | ಮುಂಡರಗಿ | ಕಲಕೇರಿ | ಕಲಕೇರಿ | - | 01 | ಸಾಮಾನ್ಯ |
| 4 | ಮುಂಡರಗಿ | ಡಂಬಳ | ಡಂಬಳ | - | 72 | ಸಾಮಾನ್ಯ |
| 5 | ಮುಂಡರಗಿ | ಡಂಬಳ | ಡಂಬಳ | - | 108 | ಸಾಮಾನ್ಯ |

ಉಪ ನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಗದಗ

| ಶಿಶು ಅಭಿವೃದ್ಧಿ ಯೋಜನೆ, ಮುಂಡರಗಿ | | | | | | |
|---|---|---|---|---|---|---|
| ಮುಂಡರಗಿ ತಾಲ್ಲೂಕಿನ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಖಾಲಿ ಇರುವ ಹುದ್ದೆಗಳ ಮಾಹಿತಿ. | | | | | | |
| **ಅಂಗನವಾಡಿ ಸಹಾಯಕಿ** | | | | | | |
| ಕ್ರ ಸಂ | ತಾಲ್ಲೂಕು | ಗ್ರಾಮ ಪಂಚಾಯತಿ ಹೆಸರು | ಗ್ರಾಮದ ಹೆಸರು | ವಾರ್ಡ ಸಂಖ್ಯೆ | ಅಂಗನವಾಡಿ ಕೇಂದ್ರದ ಹೆಸರು, ಸಂಖ್ಯೆ | ನಿಗದಿಪಡಿಸಲಾದ ಮೀಸಲಾತಿ. |
| 1 | ಮುಂಡರಗಿ | ಮುಂಡರಗಿ ಪುರಸಭೆ | – | 11 & 13 | ಕಡ್ಲಿಪೇಟಿ–170 | ಸಾಮಾನ್ಯ |
| 2 | ಮುಂಡರಗಿ | ಮುಂಡರಗಿ ಪುರಸಭೆ | – | 9 | ಮುಂಡರಗಿ–94 | ಎಸ್.ಸಿ |
| 3 | ಮುಂಡರಗಿ | ಮುಂಡರಗಿ ಪುರಸಭೆ | – | 19,16, 20, & 21 | ಮುಂಡರಗಿ–95 | ಸಾಮಾನ್ಯ |
| 4 | ಮುಂಡರಗಿ | ಮುಂಡರಗಿ ಪುರಸಭೆ | – | 7 & 17 | ಮುಂಡರಗಿ–116 | ಸಾಮಾನ್ಯ |
| 5 | ಮುಂಡರಗಿ | ಮುಂಡರಗಿ ಪುರಸಭೆ | – | 15 | ಮುಂಡರಗಿ–101 | ಸಾಮಾನ್ಯ |
| 6 | ಮುಂಡರಗಿ | ಮುಂಡರಗಿ ಪುರಸಭೆ | – | 18 & 19 | ಮುಂಡರಗಿ–137 | ಸಾಮಾನ್ಯ |
| 7 | ಮುಂಡರಗಿ | ಮುಂಡರಗಿ ಪುರಸಭೆ | – | 12 | ಶಿರೋಳ–184 | ಸಾಮಾನ್ಯ |
| 8 | ಮುಂಡರಗಿ | ಮುಂಡರಗಿ ಪುರಸಭೆ | – | 6 | ಮುಂಡರಗಿ–182 | ಸಾಮಾನ್ಯ |
| 9 | ಮುಂಡರಗಿ | ಮುಂಡರಗಿ ಪುರಸಭೆ | – | 17 & 8 | ಮುಂಡರಗಿ–183 | ಸಾಮಾನ್ಯ |
| 10 | ಮುಂಡರಗಿ | ಮುಂಡರಗಿ ಪುರಸಭೆ | – | 23 | ಎಂ ರಾಮೇನಹಳ್ಳಿ–185 | ಸಾಮಾನ್ಯ |
| 11 | ಮುಂಡರಗಿ | ಮುಂಡರಗಿ ಪುರಸಭೆ | – | 3 & 11 | ಮುಂಡರಗಿ–96 | ಸಾಮಾನ್ಯ |
| 12 | ಮುಂಡರಗಿ | ಮುಂಡರಗಿ ಪುರಸಭೆ | – | 22 | ಮುಂಡರಗಿ–140 | ಸಾಮಾನ್ಯ |
| 13 | ಮುಂಡರಗಿ | ಬಿದರಹಳ್ಳಿ | ಬಿದರಹಳ್ಳಿ | - | ಬಿದರಹಳ್ಳಿ–03(163) | ಸಾಮಾನ್ಯ |
| 14 | ಮುಂಡರಗಿ | ಮುರುಡಿ | ಮುರುಡಿ ತಾಂಡಾ | - | ಮುರುಡಿ ತಾಂಡಾ–173 | ಎಸ್.ಸಿ |
| 15 | ಮುಂಡರಗಿ | ಮುರುಡಿ | ಚಿಕ್ಕವಡ್ಡಟ್ಟಿ | - | ಚಿಕ್ಕವಡ್ಡಟ್ಟಿ–174 | ಸಾಮಾನ್ಯ |
| 16 | ಮುಂಡರಗಿ | ಕಲಕೇರಿ | ಕಲಕೇರಿ | - | ಕಲಕೇರಿ–01(01) | ಸಾಮಾನ್ಯ |
| 17 | ಮುಂಡರಗಿ | ಹೆಸರೂರು | ಕಕ್ಕೂರ | - | ಕಕ್ಕೂರ–01(28) | ಸಾಮಾನ್ಯ |
| 18 | ಮುಂಡರಗಿ | ಜಂತ್ಲಿ | ಜಂತ್ಲಿ | - | ಜಂತ್ಲಿ–01(88) | ಸಾಮಾನ್ಯ |
| 19 | ಮುಂಡರಗಿ | ಶಿವಾಜಿನಗರ | ಎಸ್.ಆರ್.ಕೇರಿ ತಾಂಡಾ | - | ಎಸ್.ಆರ್.ಕೇರಿ ತಾಂಡಾ–01(83) | ಎಸ್.ಸಿ |
| 20 | ಮುಂಡರಗಿ | ಪೇಟಾಲೂರು | ಪೇಟಾಲೂರು | - | ಪೇಟಾಲೂರು–02(61) | ಸಾಮಾನ್ಯ |
| 21 | ಮುಂಡರಗಿ | ಪೇಟಾಲೂರು | ಪೇಟಾಲೂರು | - | ಪೇಟಾಲೂರು–03(62) | ಎಸ್.ಸಿ |
| 22 | ಮುಂಡರಗಿ | ಹಳ್ಳಿಕೇರಿ | ಹಳ್ಳಿಕೇರಿ | - | ಹಳ್ಳಿಕೇರಿ–05(178) | ಸಾಮಾನ್ಯ |
| 23 | ಮುಂಡರಗಿ | ಡಂಬಳ | ಡಂಬಳ | - | ಡಂಬಳ–06(100) | ಸಾಮಾನ್ಯ |
| 24 | ಮುಂಡರಗಿ | ಡಂಬಳ | ಡಂಬಳ | - | ಡಂಬಳ–13(165) | ಸಾಮಾನ್ಯ |

ಉಪ ನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಗದಗ